ಕಿಯಾಸ್ಕ್‌ಗಳನ್ನು ಸ್ಥಾಪಿಸಲಾಗಿದೆ. ಹೋಬಳಿ ಮಟ್ಟದಲ್ಲಿ ಕಿಯಾಸ್ಕ್‌ಗಳನ್ನು ಸ್ಥಾಪಿಸುವ ಯೋಜನೆಯನ್ನು ಹಂತ ಹಂತವಾಗಿ ಕೈಗೊಂಡು ಯೋಜನೆಯ ಪ್ರಾರಂಭದ ದಿನಂಕದಿಂದ ಆರು ತಿಂಗಳ ಅವಧಿಯೊಳಗೆ ಕೊಡಗು ಜಿಲ್ಲೆಯ ಎಲ್ಲಾ ಹೋಬಳಿಗಳಿಗೂ ವಿಸ್ತರಿಸಲಾಗುವುದು.

ಆ) ಇಲ್ಲ.

ಇ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

1026 (1221) ಶ್ರೀ ಬೋಪಯ್ಯ ಕೆ.ಜಿ. (ಮಡಿಕೇರಿ) : ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೊಡಗು ಜಿಲ್ಲೆಯ ಖಾಸಗಿ ಜಮೀನಿನಲ್ಲಿ ಬಾಣೆ ಜಾಗವು ಸೇರಿದಂತೆ ಅದರಲ್ಲಿರುವ ಮರಗಳ ಮಾಲೀಕತ್ವದ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ:

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಸಿ. ಚನ್ನಿಗಪ್ಪ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) ಅಂತಹ ಯಾವುದೇ ಪ್ರಸ್ತಾವನೆ ಇರುವುದಿಲ್ಲ. ಬಾಣೆ ಜಾಗವು ಅರಣ್ಯ ಪ್ರದೇಶವಾಗಿದ್ದು ರೈತರ ತರಿ ಜಮೀನಿನ ಉಪಯೋಗಕ್ಕೆ ಬೇಕಾಗುವ ಸೊಪ್ಪು, ಸೌದೆ, ಕೃಷಿ ಉಪಕರಣಗಳನ್ನು ತಯಾರಿಸಲು ಮತ್ತು ಸ್ವಂತ ಉಪಯೋಗಕ್ಕೆ ಮರವನ್ನು ಉಚಿತವಾಗಿ ಪಡೆಯುವ ಸವಲತ್ತು (Privilege) ಮಾತ್ರ ವರ್ಗದಾರರಿಗೆ ಇರುತ್ತದೆ. ಇದರಲ್ಲಿ ಇರುವ ಮರಗಳು ಸರ್ಕಾರದ ಸೊತ್ತಾಗಿರುತ್ತದೆ.

ಆ) ಉದ್ಭವಿಸುವುದಿಲ್ಲ.

1027 (1222) ಶ್ರೀ ಬೋಪಯ್ಯ ಕೆ.ಜಿ. (ಮಡಿಕೇರಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೊಡಗು ಜಿಲ್ಲೆಯಲ್ಲಿ ಮೇ ತಿಂಗಳಲ್ಲಿ ಬಿದ್ದ ಭಾರಿ ಮಳೆಯಿಂದ ಆದ ನಷ್ಟ ಎಷ್ಟು (ವಿವರ ನೀಡುವುದು)

ಆ) ನೆರೆ ಪರಿಹಾರ ಯೋಜನೆಯಡಿ ಈ ವರ್ಷ ಎಷ್ಟು ಹಣ ಬಿಡುಗಡೆಯಾಗಿದೆ;

ಇ) ಎಷ್ಟು ಜನರಿಗೆ ಪರಿಹಾರ ಒದಗಿಸಲಾಗಿದೆ (ಕ್ಷೇತ್ರವಾರು ಮಾಹಿತಿ ನೀಡುವುದು)

ಈ) 2004–05ನೇ ಸಾಲಿನಲ್ಲಿ ಕೊಡಗು ಜಿಲ್ಲೆಗೆ ಮಳೆ ಪರಿಹಾರ ಯೋಜನೆಯಡಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ. ಯಾವ್ಯಾವ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ ಹಾಗೂ ಎಷ್ಟು ಜನರಿಗೆ ಪರಿಹಾರ ಒದಗಿಸಲಾಗಿದೆ (ಕ್ಷೇತ್ರವಾರು ಮಾಹಿತಿ ಒದಗಿಸುವುದು)

ಉ) 2004–05ನೇ ಸಾಲಿನಲ್ಲಿ ಮಳೆ ಪರಿಹಾರ ಯೋಜನೆಯಡಿ ಕೊಟ್ಟ ಹಣವನ್ನು ವಾಪಸ್ ಪಡೆಯಲಾಗಿದೆಯೇ (ವಿವರ ನೀಡುವುದು)?